ಅದರಂತೆ ನೈಟು ಹಕ್ಕುಪತ್ರ ನೀಡಿ ಖಾತೆ ಮಾಡಿ ಮುಂದಿನ ಆಶ್ರಯ ವಸತಿ ಯೋಜನೆಯಡಿ ಮನೆಗಳ ಮಂಜೂರಾತಿಯಿಂದ ಅವರುಗಳಿಗೆ ವಸತಿ ಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಹುಡ್ಕೊ ಯೋಜನೆಯಡಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಈಗಾಗಲೇ ಕ್ರಮ ತೆಗೆದುಕೊಳ್ಳಲಾಗಿದೆ.

ಚಾಮರಾಜನಗರ ಜಿಲ್ಲೆಯಲ್ಲಿ ವಿದ್ಯಾರ್ಥಿ ನಿಲಯದಲ್ಲಿ ಅವ್ಯವಹಾರ.

1958(2466)

ಶ್ರೀ ಹೆಚ್.ಎ.ಮಹದೇವ ಪ್ರಸಾದ್(ಗುಂಡ್ಲುಪೇಟೆ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹಾದು. ಈ ಬಗ್ಗೆ ಚಾಮರಾಜನಗರ ಜಿಲ್ಲೆ ಸಮಾಜ ಕಲ್ಯಾಣ ಇಲಾಖೆಯಲ್ಲಿ 2000-2001ನೇ ಸಾಲಿನಲ್ಲಿ ವಿದ್ಯಾರ್ಥಿ ನಿಲಯಗಳಿಗೆ ವಿತರಿಸಲು ಖರೀದಿಸಿರುವ ವಸ್ತುಗಳಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಹಾಗಿದ್ದರೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

1) ಚಾಮರಾಜನಗರ ಜಿಲ್ಲೆ ಸಮಾಜ ಕಲ್ಯಾಣ ಇಲಾಖೆಯಲ್ಲಿ 2000-2001ನೇ ಸಾಲಿನಲ್ಲಿ ವಿದ್ಯಾರ್ಥಿ ನಿಲಯದಲ್ಲಿನ ವಿದ್ಯಾರ್ಥಿಗಳಿಗೆ ಹಾಸಿಗೆ-ಹೊದಿಕೆ ಖರೀದಿಸುವಲ್ಲಿ ಅವ್ಯವಹಾರ ನಡೆದಿದೆ ಎಂದು ದಿನಾಂಕ 9-3-2001ರಲ್ಲಿ ಸ್ಥಳೀಯ ''ರೇಷ್ಮೆ ನಾಡು'' ದಿನಪತ್ರಿಕೆಯಲ್ಲಿ ವರದಿಯಾಗಿರುವುದು ಗಮನಕ್ಕೆ ಬಂದಿರುತ್ತದೆ.

2) ಜಿಲ್ಲಾ ಪಂಚಾಯತ್ ಚಾಮರಾಜನಗರ ಸಾಮಾನ್ಯ ಸಭೆ ದಿನಾಂಕ 26-5-2001ರಲ್ಲಿ ಈ ವಿಷಯ ಚರ್ಚೆಯಾಗಿದ್ದು, ತನಿಖೆ ನಡೆಸಿ ವರದಿಯನ್ನು ಸಲ್ಲಿಸಲು ಒಂದು ಜಿಲ್ಲಾ ಪಂಚಾಯತ್ ಸಮಿತಿಯನ್ನು ರಚಿಸಲಾಗಿದೆ.

ಕಡೂರು ತಾಲ್ಲೂಕು ಬೀರೂರು ಕ್ಷೇತ್ರದ ಎಮ್ಮೆದೊಡ್ಡಿ ಗ್ರಾಮದಲ್ಲಿ ವಿದ್ಯಾರ್ಥಿನಿಲಯ ಸ್ಥಾಪನೆ.